# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 1238 (1428)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ರಘುನಾಥ್ ರಾವ್ ಮಲ್ಕಾಪುರೆ (ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಸಚಿವರು

ವಿಷಯ : ಎಸ್.ಸಿ.ಪಿ. /ಎಸ್.ಟಿ.ಪಿ ಕಾಮಗಾರಿಗಳ ಬಗ್ಗೆ

(ಅ) 2018-19 ಮತ್ತು 2020-21ನೇ ಸಾಲಿನ ಮಾರ್ಚ್ 15ರ ಅಂತ್ಯಕ್ಕೆ ಲೋಕೋಪಯೋಗಿ ಇಲಾಖೆಯಿಂದ ಎಸ್.ಸಿ.ಪಿ. ಮತ್ತು ಎಸ್.ಟಿ.ಪಿ ಯೋಜನೆಯಡಿಯಲ್ಲಿ ವಿವಿಧ ಲೆಕ್ಕ ಶೀರ್ಷಿಕೆಯಡಿ ಬೀದರ್ ಜಿಲ್ಲೆಗೆ ಒಟ್ಟು ಎಷ್ಟು ಅನುದಾನ ನೀಡಲಾಗಿದೆ ; (ವರ್ಷವಾರು, ಕಾಮಗಾರಿವಾರು ತಾಲ್ಲೂಕುಗಳೊಂದಿಗೆ ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ಸದರಿ ಯೋಜನೆಗೆ ಮಂಜೂರಾದ ಅನುದಾನದಲ್ಲಿ ಯಾವ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಕೈಗೊಂಡಿದ್ದಲ್ಲಿ, ಪ್ರತ್ಯೇಕವಾಗಿ ಕಾಮಗಾರಿಗಳಿಗೆ ತಗುಲಿದ್ದ ವೆಚ್ಚ, ಕಾಮಗಾರಿ ನಿರ್ವಹಿಸಿದ ಗುತ್ತಿಗೆದಾರರ ಹೆಸರು, ವಿಧಾನ ಸಭಾ ಕ್ಷೇತ್ರವಾರು ಸ್ಪಷ್ಟ ಮಾಹಿತಿ ನೀಡುವುದು ;

(ಇ) ಮಂಜೂರಾದ ಕಾಮಗಾರಿಗಳನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಕಾಲೋನಿಗಳಲ್ಲಿ ಕೈಗೊಳ್ಳದೆ ಬೇರೆ ಬೇರೆ ಜನರಲ್ ವಾರ್ಡ್ / ಕಾಲೋನಿಗಳಲ್ಲಿ ಕಾಮಗಾರಿಗಳನ್ನು ಕೈಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರವು ಅಧಿಕಾರಿ/ಗುತ್ತಿಗೆದಾರರ ಮೇಲೆ ಕೈಗೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)